RNU AIR DHARWAD

**NOVEMBER 20,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

ಕರ್ನಾಟಕ– ದೇಶದ ಸ್ಟಾರ್ಟ್ ಅಪ್ ಉದ್ಯಮಗಳ ರಾಜಧಾನಿಯಾಗಿದ್ದು, ರಾಜ್ಯದಲ್ಲಿ 3 ಸಾವಿರದ 36 ಸ್ಟಾರ್ಟ್ ಅಪ್ ಗಳಿದ್ದು, 200 ಕ್ಕೂ ಅಧಿಕ ಹೊಸ ಉದ್ಯಮಗಳಿಗೆ ಬಂಡವಾಳ, ಮಾರ್ಗದರ್ಶನ ಹಾಗೂ ಬೆಳವಣಿಗೆಗೆ ಅವಕಾಶ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. 27 ನೇ ಆವೃತ್ತಿಯ ಬೆಂಗಳೂರು ತಂತ್ರಜ್ಞಾನ ಶೃಂಗಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಕೋಚನಹಳ್ಳಿಯಲ್ಲಿ ಎಲೆಕ್ಟ್ರಾನಿಕ್ಸ್ ಉತ್ಪಾದನಾ ಘಟಕವನ್ನು ಆರಂಭಿಸಲಾಗುತ್ತಿದ್ದು, ಇದು ಜಾಗತಿಕ ಸೆಮಿಕಂಡಕ್ಟರ್ ಉದ್ಯಮದಲ್ಲಿ ರಾಜ್ಯದ ಪಾತ್ರವನ್ನು ಹೆಚ್ಚಿಸಿ, ಉದ್ಯೋಗ ಸೃಷ್ಟಿಗೂ ಸಹಕಾರಿಯಾಗಲಿದೆ ಎಂದರು. ಇದೇ ಸಂದರ್ಭ ವಿದ್ಯಾರ್ಥಿಗಳಲ್ಲಿ ಕೌಶಲವನ್ನು ಹೆಚ್ಚಿಸುವ ಸಲುವಾಗಿ ರೂಪಿಸಿರುವ 'ನಿಪುಣ ಕರ್ನಾಟಕ' ಕಾರ್ಯಕ್ರಮಕ್ಕೆ ಅವರು ಚಾಲನೆ ನೀಡಿದರು.

<><><>

ಪರಿಸರ ಸಂರಕ್ಷಣೆ ನಿಟ್ಟಿನಲ್ಲಿ ಎಲ್ಲರೂ ಗಮನ ಹರಿಸಬೇಕು, ಸ್ವಚ್ಛ ಪರಿಸರಕ್ಕೆ ಪೂರಕವಾಗಿರುವ ಗಾಳಿ, ನೀರು, ಮಣ್ಣನ್ನು ಶುದ್ಧವಾಗಿಡಬೇಕು ಎಂದು ಹಿರಿಯ ವಿಜ್ಞಾನ ಲೇಖಕ ನಾಗೇಶ ಹೆಗಡೆ ಹೇಳಿದರು. ಧಾರವಾಡದ ವಿದ್ಯಾವರ್ಧಕ ಸಂಘದ ಡಾಕ್ಟರ್ ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಆಯೋಜಿಸಲಾಗಿರುವ, ಕರ್ನಾಟಕ ರಾಜ್ಯೋತ್ಸವ ಮತ್ತು ಕರ್ನಾಟಕ ನಾಮಕರಣ–50 ಸಂಭ್ರಮದ ಅಂಗವಾಗಿ ನಡೆದ 'ಧರೆಗೆ ದೊಡ್ಡವರು' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನಗರದ ಹೊರವಲಯಗಳಲ್ಲಿರುವ ತ್ಯಾಜ್ಯ ಗುಡ್ಡೆಗಳ ಉರಿಸುವಿಕೆಯಿಂದ ಹೊರಬರುವ ವಿಷಾನಿಲಗಳು ದೇಹ ಮತ್ತು ಮಾನಸಿಕ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತವೆ. ಇಂತಹ ಸಂದರ್ಭದಲ್ಲಿ ಭೂಮಿಯ ಸಂಕಷ್ಟವನ್ನು ಅರ್ಥ ಮಾಡಿಕೊಂಡು, ಅದರ ಸುರಕ್ಷತೆ ನಿಟ್ಟಿನಲ್ಲಿ ಹೆಚ್ಚಿನ ಗಮನ ಹರಿಸಬೇಕಿದೆ ಎಂದರು.

<><><>

ಯಕ್ಷಗುರು, ಉಡುಪಿಯ ಬನ್ನಂಜೆ ಸಂಜೀವ ಸುವರ್ಣ ಅವರಿಗೆ ಕರ್ನಾಟಕ ಯಕ್ಷಗಾನ ಅಕಾದೆಮಿ ವತಿಯಿಂದ, 2023ನೇ ಸಾಲಿನ ಪಾರ್ತಿಸುಬ್ಬ ಪ್ರಶಸ್ತಿಯನ್ನು ಮಂಗಳೂರಿನಲ್ಲಿ ಪ್ರದಾನಿಸಲಾಯಿತು. ಪ್ರಶಸ್ತಿಯು ಒಂದು ಲಕ್ಷ ರೂಪಾಯಿ ನಗದು ಹಾಗೂ ಫಲಕ ಒಳಗೊಂಡಿದೆ. ಒಟ್ಟು 19 ಸಾಧಕರಿಗೆ ಕರ್ನಾಟಕ ಯಕ್ಷಗಾನ ಆಕಾದೆಮಿ 2023 ನೇ ಸಾಲಿನ ಪ್ರಶಸ್ತಿ, ಇಬ್ಬರು ಸಾಧಕರಿಗೆ 2022 ನೇ ಸಾಲಿನ ಪ್ರಶಸ್ತಿ, ಒಬ್ಬರಿಗೆ 2021 ನೇ ಸಾಲಿನ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಯಕ್ಷಗಾನ ಭಾಗವತ ದಿನೇಶ ಅಮ್ಮಣ್ಣಾಯ, ಹಿರಿಯ ಕಲಾವಿದರಾದ ನಾರಾಯಣಪ್ಪ ಎ.ಆರ್, ಜಬ್ಬಾರ್ ಸುಮೋ, ಪೊಲ್ಯ ಲಕ್ಷ್ಮೀನಾರಾಯಣ ಶೆಟ್ಟಿ, ಚೆನ್ನಪ್ಪ ಗೌಡ ಸಜಿಪ ಅವರು ಗೌರವ ಪ್ರಶಸ್ತಿ ಸ್ವೀಕರಿಸಿದರು. ಯಕ್ಷಸಿರಿ ಪ್ರಶಸ್ತಿಯನ್ನು ತೆಂಕುತಿಟ್ಟಿನ ವೇಷಧಾರಿ ಕಾಸರಗೋಡಿನ ರಘುನಾಥ ಶೆಟ್ಟಿ ಬಾಯಾರು, ದಿವಾಕರ

ದಾಸ ಕಾವಳಕಟ್ಟೆ, ಸುಬ್ರಾಯ ಪಾಟಾಳಿ ಸಂಪಾಜೆ, ಬಡಗುತಿಟ್ಟು ವೇಷಧಾರಿ ಕುಂದಾಪುರದ ನರಾಡಿ ಭೋಜರಾಜ ಶೆಟ್ಟಿ, ಸದಾನಂದ ಪ್ರಭು, ಹೊಳೆಮಗೆ ನಾಗಪ್ಪ ಮರಕಾಲ, ಶಿರಳಗಿ ತಿಮ್ಮಪ್ಪ ಹೆಗಡೆ, ಬಾಬು ಕುಲಾಲ್ ಹಳ್ಳಾಡಿ, ಶಿವಯ್ಯ ಜೇಯಪ್ಪ ಅವರಿಗೆ ಪ್ರದಾನ ಮಾಡಲಾಯಿತು.

<><><>

ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿದೆ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮನವಿ ಮೇರೆಗೆ ಆರೋಗ್ಯ ಸೌಲಭ್ಯ ಕಲ್ಪಿಸುವ ಪ್ರಯತ್ನ ನಡೆದಿದೆ. ಪತ್ರಕರ್ತರ ಕುಟುಂಬಗಳಿಗೆ ಆರೋಗ್ಯ ಸಂಜೀವಿನಿ ಸೌಲಭ್ಯವನ್ನು ಒದಗಿಸಿಕೊಡುವ ನಿಟ್ಟಿನಲ್ಲಿ ಮುಖ್ಯಮಂತ್ರಿಯವರ ಜೊತೆ ಮಾತನಾಡಿ ಕ್ರಮ ವಹಿಸಲಾಗುವುದು ಎಂದು ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ ಪ್ರಭಾಕರ ಹೇಳಿದರು.

ಬೆಂಗಳೂರಿನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಬೆಂಗಳೂರು ಪ್ರೆಸ್ ಕ್ಲಬ್ ಆಯೋಜಿಸಿದ್ದ, ಕನ್ನಡ ರಾಜ್ಯೋತ್ಸವ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ಪುರಸ್ಕೃತ ಪತ್ರಕರ್ತರಿಗೆ ಏರ್ಪಡಿಸಲಾಗಿದ್ದ ಅಭಿನಂದನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಪತ್ರಕರ್ತರಿಗೆ ಆರೋಗ್ಯ ವಿಮಾ ಸೌಲಭ್ಯ ಕಲ್ಪಿಸಬೇಕೆಂಬುದು ಕೆ.ಯು.ಡಬ್ಲ್ಯು.ಜೆ ಬೇಡಿಕೆಯಾಗಿದೆ ಎಂದರು.

<><><>

ಮಂಡ್ಯದಲ್ಲಿ ನಡೆಯಲಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಕನ್ನಡ ಜ್ಯೋತಿ ಹೊತ್ತ ರಥ ಯಾತ್ರೆ ನಿನ್ನೆ ಗೌರಿಬಿದನೂರು ಮೂಲಕ ಚಿಕ್ಕಬಳ್ಳಾಪುರ ಜಿಲ್ಲೆಗೆ ಆಗಮಿಸಿ ಮಂಚೇನಹಳ್ಳಿ, ಗುಡಿಬಂಡೆ ಪಟ್ಟಣದಲ್ಲಿ ಸಂಚರಿಸಿತು.

<><><>

ಕಲಬುರಗಿಯ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ನಿನ್ನೆ ಆರಂಭಗೊಂಡ ಐ.ಟಿ.ಎಫ್, ಕಲಬುರಗಿ ಓಪನ್–2024 ಟೆನಿಸ್ ಕ್ರೀಡಾಕೂಟದ ಪ್ರಮುಖ  ಸುತ್ತಿನ ಪಂದ್ಯಗಳಿಗೆ ಶಾಸಕ ಅಲ್ಲಮಪ್ರಭು ಪಾಟೀಲ ಚಾಲನೆ ನೀಡಿದರು. ಭಾರತದ ದೇವ್ ಜೇವಿಯಾ, ಧೀರಜ್ ಕೆ ಹಾಗೂ ಮನೀಶ್ ಸುರೇಶ್ ಕುಮಾರ ಟೆನಿಸ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಪ್ರಿಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. 7 ನೇ ಶ್ರೇಯಾಂಕಿತ ದೇವ್ ಜೇವಿಯಾ ಅವರು ಮನೀಶ್ ಗಣೇಶ ವಿರುದ್ಧ 6–4, 6–3 ಅಂತರದಿಂದ ಗೆಲುವು ಸಾಧಿಸುವ ಮೂಲಕ 2 ನೇ ಸುತ್ತಿಗೆ ಪ್ರವೇಶಿಸಿದರು. ಮನೀಶ್ ಸುರೇಶಕುಮಾರ್ ಅವರು ಸಿದ್ಧಾಂತ ಬಾಂಥಿಯಾ ಅವರನ್ನು 7–6, 6–4 ಸೆಟ್ ಗಳ ಅಂತರದಿಂದ ಮಣಿಸಿದರು.ಇನ್ನೊಂದು ಪಂದ್ಯದಲ್ಲಿ ಧೀರಜ ಕೆ ಅವರು ಕೊರಿಯಾದ ಯುನ್ಸೆಕ್ ಜಾಂಗ್ ವಿರುದ್ಧ ಜಯ ಗಳಿಸಿದರು.

<><><>

ದಕ್ಷಿಣ ಕನ್ನಡ ಜಿಲ್ಲೆ ಉಪ್ಪಿನಂಗಡಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜರುಗಿದ, ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಗುಡ್ಡಗಾಡು ಓಟ ಸ್ಪರ್ಧೆಯಲ್ಲಿ ಅತಿಥೇಯ ಮಂಗಳೂರು ವಿಶ್ವವಿದ್ಯಾಲಯ ಚಾಂಪಿಯನ್ ಶಿಪ್ ಪ್ರಶಸ್ತಿ ಜಯಿಸಿದೆ. ಒಟ್ಟು 69 ಅಂಕಗಳನ್ನು ತಂಡ ಗಳಿಸಿತು. ಮುಂಬೈ ವಿಶ್ವವಿದ್ಯಾಲಯ ಎರಡನೇ ಸ್ಥಾನ ಗಳಿಸಿತು. ಗುಡ್ಡಗಾಡು ಓಟ ಸ್ಪರ್ಧೆಯಲ್ಲಿ ಮುಂಬೈ ವಿಶ್ವವಿದ್ಯಾಲಯದ ರಾಜ್ ತಿವಾರಿ ಚಿನ್ನದ ಪದಕ ಜಯಿಸಿದರು. ಕೊಲ್ಹಾಪುರದ ಪ್ರಧಾನ ಕಿರೂಳ್ಕರ್ ಎರಡನೇ ಸ್ಥಾನ ಗಳಿಸಿ ಬೆಳ್ಳಿ ಪದಕಕ್ಕೆ ಭಾಜನರಾದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>